I/243604/2022

**ಕರ್ನಾಟಕ ಸರ್ಕಾರ**

ಸಂಖ್ಯೆ:ಗ್ರಾಅಪ:42(10)-2-1:ಆರ್ ಆರ್ ಸಿ:21
(ಇ-530547)

ಕರ್ನಾಟಕ ಸರ್ಕಾರದ ಸಚಿವಾಲಯ
ಬಹುಮಹಡಿ ಕಟ್ಟಡ, ಬೆಂಗಳೂರು,
ದಿನಾಂಕ: 06.04.2022

**ತಿದ್ದುಪಡಿ ಆದೇಶ**

**ವಿಷಯ:** 2021-22 ನೇ ಸಾಲಿನಲ್ಲಿ ಮಾನ್ಯ ಮುಖ್ಯಮಂತ್ರಿಗಳ ವಿಶೇಷ ಮಂಜೂರಾತಿ ಕಾರ್ಯಕ್ರಮದಡಿ ಚಿಕ್ಕಮಗಳೂರು ಜಿಲ್ಲೆಯ ಶೃಂಗೇರಿ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯಲ್ಲಿ ಮಂಜೂರಾತಿ ನೀಡಿದ ರಸ್ತೆ ಕಾಮಗಾರಿಗಳನ್ನು ಬದಲಾವಣೆ ಮಾಡುವ ಕುರಿತು.

**ಉಲ್ಲೇಖ:**
1. ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ:42(10)-2:ಆರ್ ಆರ್ ಸಿ:21 (ಇ-530547), ದಿನಾಂಕ: 22.12.2021.
2. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಶೃಂಗೇರಿ ಜಿಲ್ಲಾ ಪಂಚಾಯತ್,ಸಂಖ್ಯೆ:20095:ZP-CKM-12012(13)/95/2021-DEVE ದಿನಾಂಕ: 14/03/2022.

********

ಓದಲಾದ -1 ರ ಆದೇಶದಲ್ಲಿ 2021-22 ನೇ ಸಾಲಿನಲ್ಲಿ ಮಾನ್ಯ ಮುಖ್ಯಮಂತ್ರಿಗಳ ವಿಶೇಷ ಮಂಜೂರಾತಿ ಕಾರ್ಯಕ್ರಮದಡಿ ಚಿಕ್ಕಮಗಳೂರು ಜಿಲ್ಲೆಯ ಶೃಂಗೇರಿ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯಲ್ಲಿ ಒಟ್ಟು ಹಂಚಿಕೆಯಾದ ರೂ.5.00ಕೋಟಿಗಳ ಪೈಕಿ ರೂ.3.69ಕೋಟಿಗಳ ಮೊತ್ತದಲ್ಲಿ 36 ರಸ್ತೆ ಕಾಮಗಾರಿಗಳನ್ನು ಅಭಿವೃದ್ಧಿ ಪಡಿಸಲು ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆಯಿಂದ ಅನುಷ್ಠಾನ ಮಾಡಲು ಆದೇಶ ಹೊರಡಿಸಲಾಗಿರುತ್ತದೆ.

ಓದಲಾದ -2 ರ ಪತ್ರದಲ್ಲಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಜಿಲ್ಲಾ ಪಂಚಾಯತ್ ಚಿಕ್ಕಮಗಳೂರು ರವರು ಈ ಹಿಂದೆ ಹೊರಡಿಸಲಾಗಿದ್ದ ಆದೇಶದಲ್ಲಿನ 36 ರಸ್ತೆ ಕಾಮಗಾರಿಗಳ ಪೈಕಿ 1 ಕಾಮಗಾರಿಯನ್ನು ಕೆಳಕಂಡಂತೆ ಬದಲಾವಣೆ ಮಾಡಲು ಪ್ರಸ್ತಾವನೆಯನ್ನು ಸಲ್ಲಿಸಿರುತ್ತಾರೆ.

| ಮೂಲ ಆದೇಶದ ಕ್ರ.ಸಂ | ಅನುಮೋದನೆಯಾಗಿರುವ ಕಾಮಗಾರಿ | ಅಂದಾಜು ಮೊತ್ತ (ರೂ.ಲಕ್ಷಗಳಲ್ಲಿ) | ಬದಲಾವಣೆ ಕೋರಿರುವ ಕಾಮಗಾರಿ ಹೆಸರು | ಅಂದಾಜು ಮೊತ್ತ (ರೂ.ಲಕ್ಷಗಳಲ್ಲಿ) |
|---|---|---|---|---|
| **13** | ಕೊಪ್ಪ ತಾಲ್ಲುಕು ಕೊಪ್ಪ ಗ್ರಾಮಾಂತರ ಗ್ರಾ. ಪಂ ಕೊಪ್ಪ ಅರಣ್ಯ ನೌಕರರ ಸಮುದಾಯ ಭವನ ರಸ್ತೆಯಿಂದ ವಿಧ್ಯಾನಗರ ರಾಘವೇಂದ್ರ, ಕೃಷ್ಣ, ದೇಜುಪೂಜಾರಿ, ನಾರಾಯಣ ಪೂಜಾರಿ ರವಿಗೌಡ ಮತ್ತು ಇತರರ ಮನೆಗಳಿಗೆ ಸಂಪರ್ಕ ರಸ್ತೆ ಅಭಿವೃದ್ಧಿ | 10.00 | ಕೊಪ್ಪ ತಾಲ್ಲುಕು ಕೊಪ್ಪ ಗ್ರಾಮಾಂತರ ಗ್ರಾ. ಪಂ ವಿಧ್ಯಾನಗರದ ನಾಗರಾಜುಗೌಡ, ಇಂದಿರಮ್ಮ ಕೃಷ್ಣಾಚಾರ್ ಮನೆಯಿಂದ ಚೌಡೇಶ್ವರಿ ದೇವಸ್ಥಾನದ ಬಲಭಾಗದ ವರೆಗೆ ಸಂಪರ್ಕ ರಸ್ತೆ ಅಭಿವೃದ್ಧಿ | 10.00 |
| | ಒಟ್ಟು | **10.00** | ಒಟ್ಟು | **10.00** |

ಕೋಷ್ಟಕದಲ್ಲಿರುವಂತೆ ರಸ್ತೆ ಕಾಮಗಾರಿಯನ್ನು ಕೆಳಕಂಡ ಷರತ್ತಿಗೊಳಪಟ್ಟು ಬದಲಾವಣೆ ಮಾಡಲು ಸರ್ಕಾರವು ಅನುಮೋದಿಸಿದ್ದು, ಉಳಿದಂತೆ ಈ ಹಿಂದೆ ಹೊರಡಿಸಿರುವ ಆದೇಶದಲ್ಲಿ ಯಾವುದೇ ಬದಲಾವಣೆಯಿರುವುದಿಲ್ಲ.

ಷರತ್ತುಗಳು:

1. ಓದಲಾದ-1 ರ ಆದೇಶದಲ್ಲಿ ಈಗಾಗಲೇ ಮಂಜೂರಾತಿ ನೀಡಿದ ರಸ್ತೆ ಕಾಮಗಾರಿಗಳು ಆರಂಭಗೊಳ್ಳದಿರುವುದನ್ನು ಖಚಿತಪಡಿಸಿಕೊಳ್ಳತಕ್ಕದ್ದು, ಒಂದೊಮ್ಮೆ ಕಾಮಗಾರಿಗಳು ಪ್ರಾರಂಭವಾಗಿದ್ದಲ್ಲಿ ಆರಂಭಿಸತಕ್ಕದ್ದಲ್ಲ.
2. ಹೊಸದಾಗಿ ಬದಲಾವಣೆಯ ಮಂಜೂರಾತಿಗೆ ಕೋರಿರುವ ರಸ್ತೆ ಕಾಮಗಾರಿಯು ಡಿಆರ್ ಆರ್ ಪಿ ಪಟ್ಟಿಯಲ್ಲಿರತಕ್ಕದ್ದು.
3. ಈ ಕಾಮಗಾರಿಗಳು ಇನ್ನಾವುದೇ ಯೋಜನೆಯಲ್ಲಿ ಅಭಿವೃದ್ಧಿ ತೆಗೆದುಕೊಂಡಿರಬಾರದು ಮತ್ತು ಪುನರಾವರ್ತನೆಯಾಗಿರತಕ್ಕದ್ದಲ್ಲ. ಕಾಮಗಾರಿಗಳ ಪುನರಾವರ್ತನೆಯಲ್ಲಿ ವ್ಯತ್ಯಾಸವಿದ್ದರೆ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳೇ ಜವಾಬ್ದಾರಿಯಾಗುತ್ತಾರೆ.
4. ಮತ್ತೆ ಮತ್ತೆ ಬದಲಾವಣೆಗೆ ಪ್ರಸ್ತಾವನೆಯನ್ನು ಸಲ್ಲಿಸತಕ್ಕದ್ದಲ್ಲ.

ಕರ್ನಾಟಕ ರಾಜ್ಯಪಾಲರ ಆದೇಶದನುಸಾರ
ಮತ್ತು ಅವರ ಹೆಸರಿನಲ್ಲಿ

Signed by Ramesh .d.o
Date: 06-04-2022 19:13:30

(ರಮೇಶ್.ಡಿ.ಓ)
ಉಪ ನಿರ್ದೇಶಕರು, ಗ್ರಾಮೀಣಾಭಿವೃದ್ಧಿ
ಹಾಗೂ ಪದನಿಮಿತ್ತ ಸರ್ಕಾರದ ಅಧೀನ ಕಾರ್ಯದರ್ಶಿ
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ

ಪ್ರತಿಯನ್ನು:

1. ಮಹಾಲೇಖಪಾಲರು (ಲೆಕ್ಕ ಪತ್ರ), ಕರ್ನಾಟಕ, ಬೆಂಗಳೂರು.
2. ಮಹಾಲೇಖಪಾಲರು (ಆಡಿಟ್-1), ಕರ್ನಾಟಕ , ಬೆಂಗಳೂರು.
3. ಮಹಾಲೇಖಪಾಲರು (ಆಡಿಟ್-2), ಕರ್ನಾಟಕ, ಬೆಂಗಳೂರು.
4. ಅಪರ ಮುಖ್ಯ ಕಾರ್ಯದರ್ಶಿಗಳು ಹಾಗೂ ಅಭಿವೃದ್ಧಿ ಆಯುಕ್ತರು, ವಿಧಾನಸೌಧ, ಬೆಂಗಳೂರು.
5. ಅಪರ ಮುಖ್ಯ ಕಾರ್ಯದರ್ಶಿಗಳು, ಆರ್ಥಿಕ ಇಲಾಖೆ, ವಿಧಾನಸೌಧ, ಬೆಂಗಳೂರು.
6. ಕಾರ್ಯದರ್ಶಿಗಳು, ಆರ್ಥಿಕ ಇಲಾಖೆ (PMU) (IF), 5ನೇ ಹಂತ, ಬಹುಮಹಡಿಗಳ ಕಟ್ಟಡಮ ಬೆಂಗಳೂರು.
7. ಪ್ರಧಾನ ಕಾರ್ಯದರ್ಶಿಗಳು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಬೆಂಗಳೂರು.
8. ಪ್ರಧಾನ ಕಾರ್ಯದರ್ಶಿಗಳು (ಪಂ.ರಾಜ್) ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಬೆಂಗಳೂರು.
9. ವಿಶೇಷಾಧಿಕಾರಿಗಳು (ಜಿಪಂ) ಮತ್ತು ಪದನಿಮಿತ್ತ ಸರ್ಕಾರದ ಜಂಟಿ ಕಾರ್ಯದರ್ಶಿ, ಆರ್ಥಿಕ ಇಲಾಖೆ, ವಿಧಾನಸೌಧ, ಬೆಂಗಳೂರು.
10. ಆಂತರಿಕ ಆರ್ಥಿಕ ಸಲಹೆಗಾರರು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಬೆಂಗಳೂರು.
11. ನಿರ್ದೇಶಕರು,ಖಜಾನೆ ಇಲಾಖೆ, ಬೆಂಗಳೂರು.
12. ಉಪ ನಿರ್ದೇಶಕರು, ನೆಟ್ ವರ್ಕ್ ಮ್ಯಾನೇಜ್‌ಮೆಂಟ್ ಸೆಂಟರ್ , ಟ್ರೆಜರಿ ಡಿಪಾರ್ಟ್ ಮೆಂಟ್, ಖನಿಜ ಭವನ, ರೇಸ್‌ಕೋರ್ಸ್ ರಸ್ತೆ, ಬೆಂಗಳೂರು.
13. ಅಧೀನ ಕಾರ್ಯದರ್ಶಿಗಳು (ವೆಚ್ಚ-6), ಜಿ.ಪಂ. ಆರ್ಥಿಕ ಇಲಾಖೆ , ವಿಧಾನಸೌಧ, ಬೆಂಗಳೂರು.
14. ಮುಖ್ಯ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆ, ಗ್ರಾಮೀಣಾಭಿವೃದ್ಧಿ ಭವನ, ಆನಂದರಾವ್ ವೃತ್ತ, ಬೆಂಗಳೂರು.
15. ವ್ಯವಸ್ಥಾಪಕ ನಿರ್ದೇಶಕರು, ಕೆಆರ್‌ಐಡಿಎಲ್, ಬೆಂಗಳೂರು.
16. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಚಿಕ್ಕಮಗಳೂರು ಜಿಲ್ಲಾ ಪಂಚಾಯತಿ.
17. ಮಾಹಿತಿ ಕೇಂದ್ರದ ಗಣಕ ಕೋಶ ಮುಖ್ಯಸ್ಥರು, ಗ್ರಾಅಪಂರಾ ಇಲಾಖೆ ಇವರಿಗೆ ಇಲಾಖೆಯ ವೆಬ್‌ಸೈಟ್‌ನಲ್ಲಿ ಅಳವಡಿಸಲು.
18. ಅಂತರ್ಜಾಲದಲ್ಲಿ ಅಳವಡಿಸಲು ಹಾಗೂ ಗ್ರೂಪ್ ಮೈಲ್ ನಲ್ಲಿ ರವಾನಿಸಲು ಸೂಚಿಸಿದೆ.
19. ರಕ್ಷಾ ಕಡತ/ ಹೆಚ್ಚುವರಿ ಪ್ರತಿ.